**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**
ದೀಪಾಂಜಲಿನಗರ, ವಾರ್ಡ್ ಸಂಖ್ಯೆ-158, ಪಾಲಿಕೆ ಸದಸ್ಯರ ಕಛೇರಿ, 8ನೇ ಮುಖ್ಯರಸ್ತೆ, ಆವಲಹಳ್ಳಿ ಬಿಡಿಎ ಬಡಾವಣೆ,
(ಅಭಯ ಆಂಜನೇಯ ದೇವಸ್ಥಾನ ಹತ್ತಿರ) ಬೆಂಗಳೂರು-560 026

---

ಸಂಖ್ಯೆ: ಸ.ಕಾ.ನಿ.ಅ/ಗಾಳಿ/ಪಿಆರ್/ /22-23

ದಿನಾಂಕ:-22-08-2022

ವಾರ್ಡ್ ಸಂಖ್ಯೆ : 158 ವಾರ್ಡ್ ಸಭೆಯ ನಡವಳಿ

**ಸಭೆಗೆ ಹಾಜರಾಗಿ ಭಾಗವಹಿಸಿದ ಸದಸ್ಯರು ಮತ್ತು ಸಾರ್ವಜನಿಕರ ವಿವರ:**

| ಕ್ರಮ ಸಂಖ್ಯೆ | ಅಧಿಕಾರಿಗಳು ಮತ್ತು ಸದಸ್ಯರುಗಳ ಹೆಸರು | ಪದನಾಮ/ಅಧ್ಯಕ್ಷರು | ಹಾಜರಾತಿ |
|---|---|---|---|
| 1 | ಶ್ರೀ. ಜಯಶಂಕರ್ | ನೊಡೇಲ್ ಅಧಿಕಾರಿ | ಹಾಜರಾಗಿರುತ್ತಾರೆ |
| 2 | ಶ್ರೀ. ಮಂಜುನಾಥ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ. | ಹಾಜರಾಗಿರುತ್ತಾರೆ |
| 3 | ಶ್ರೀ. ಹೆಚ್. ಮಂಜುನಾಥ್ | ಕಿ.ಆ. ಪರಿವೀಕ್ಷಕರು | ಹಾಜರಾಗಿರುತ್ತಾರೆ |
| 4 | ಶ್ರೀ.ಹೇಮಂತ್ | ಹಿ.ಆ. ಪರಿವೀಕ್ಷಕರು | ಹಾಜರಾಗಿರುತ್ತಾರೆ |

**ಸಭೆಗೆ ಹಾಜರಿದ್ದ ಸಾರ್ವಜನಿಕರು**

1. ಶ್ರೀಮತಿ. ಗಿರಿಜಮ್ಮ
2. ಶ್ರೀಮತಿ. ರಾಜೇಶ್ವರಿ
3. ಶ್ರೀ. ಕೃಷ್ಣ
4. ಶ್ರೀ. ಮಂಜುನಾಥ್ .ಎಸ್.
5. ಶ್ರೀಮತಿ. ವತ್ಸಲ

ಸಮಿತಿಯ ಕಾರ್ಯದರ್ಶಿಯವರು ಹಾಜರಿದ್ದ ಎಲ್ಲಾ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಮತ್ತು ಸದಸ್ಯರುಗಳಿಗೆ ಸಭೆಯಲ್ಲಿ ಹಾಜರಿದ್ದ ಎಲ್ಲರಿಗೂ ಸ್ವಾಗತ ಕೋರಿದ ನಂತರ ಸಭೆಯನ್ನು ಆರಂಭಿಸಲಾಯಿತು.

ಈ ಹಿಂದಿನ ಸಭೆಯಲ್ಲಿ ಬಂದಿದ್ದ ದೂರುಗಳ ಮೇಲೆ ಕೈಗೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸುತ್ತ ಪ್ರಸ್ತುತ ಕುಂದು ಕೊರತೆಗಳ ಬಗ್ಗೆ ಚರ್ಚೆ ಪ್ರಾರಂಭಿಸಲಾಯಿತು.

ಅಭಯ ಆಂಜನೇಯ ದೇವಸ್ಥಾನದ ರಸ್ತೆಯಲ್ಲಿ ಮರದ ಕೊಂಬೆಗಳನ್ನು ಕತ್ತರಿಸಲು ಸಭೆಯಲ್ಲಿ ಹಾಜರಿದ್ದ ಶ್ರೀಮತಿ.ಗಿರಿಜಮ್ಮ ರವರು ಕೋರಿದರು. ಸದರಿ ವಿಷಯದ ಬಗ್ಗೆ ಕ್ರಮವನ್ನು ಕೈಗೊಳ್ಳಲು ಸಬಂಧಪಟ್ಟ ಅಧಿಕಾರಿಗಳಿಗೆ ನೋಡೆಲ್ ಅಧಿಕಾರಿ ರವರು ತಿಳಿಸಿದರು.

**ಕ್ರಮ : ಅರಣ್ಯಾಧಿಕಾರಿ ಇಲಾಖೆ**

ವಿನೋಭ ಕಾಲೋನಿ 3ನೇ ಮತ್ತು 4ನೇ ಅಡ್ಡರಸ್ತೆಯಲ್ಲಿ ಬೋರ್‌ವೆಲ್ ಸಮಸ್ಯೆ ಇದ್ದು ಸರಿಪಡಿಸಬೇಕೆಂದು ಶ್ರೀಮತಿ.ಗಿರಿಜಮ್ಮ ಹಾಗೂ ಆವಲಹಳ್ಳಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚ ಬೇಕೆಂದು ಸ್ಥಳೀಯ ಸಾರ್ವಜನಿಕರು ತಿಳಿಸಿದರು. ಸಂಬಂಧಪಟ್ಟ ಅಧಿಕಾರಿಗಳಿಗೆ ಕ್ರಮವನ್ನು ಕೈಗೊಳ್ಳಲು ತಿಳಿಸಲಾಗುವುದು ಎಂದು ನೋಡೆಲ್ ಅಧಿಕಾರಿ ರವರು ತಿಳಿಸಿದರು.

**ಕ್ರಮ : ಕಾಮಗಾರಿ ಇಲಾಖೆ**

ಆವಲಹಳ್ಳಿ 5ನೇ ಅಡ್ಡರಸ್ತೆಯಲ್ಲಿ ಅಶ್ವತ್ಥ್ ಕಟ್ಟೆ ನಿರ್ಮಾಣ ಮಾಡಿಕೊಡಬೇಕೆಂದು ಮತ್ತು ಈರಣ್ಣಗುಡ್ಡೆ ಸ್ಮಶಾನಕ್ಕೆ ನೀರಿನ ವ್ಯವಸ್ಥೆ ಕಲ್ಪಿಸಿಕೊಡಬೇಕೆಂದು ಸಭೆಯಲ್ಲಿ ಸಾರ್ವಜನಿಕರು ಕೋರಿದರು. ಕ್ರಮವನ್ನು ಕೈಗೊಳ್ಳುವಂತೆ ನೋಡೆಲ್ ಅಧಿಕಾರಿ ರವರು ತಿಳಿಸಿದರು.

**ಕ್ರಮ : ಕಾಮಗಾರಿ ಇಲಾಖೆ**

ಸಭೆಯನ್ನು ಕಾರ್ಯದರ್ಶಿಗಳಾದ ಶ್ರೀಮತಿ. ಚೈತ್ರ .ಜಿ.ಎಸ್. ರವರು ವಂದನಾರ್ಪಣೆಯೊಂದಿಗೆ ಮುಕ್ತಾಯ ಮಾಡಿದರು.

23/08/22

ಕಾರ್ಯದರ್ಶಿ
ವಾರ್ಡ್ ಸಂಖ್ಯೆ : 158 (ದೀಪಾಂಜಲಿನಗರ)

**ಪ್ರತಿಯನ್ನು:-** ಮಾನ್ಯ ಆಯುಕ್ತರ ಆಪ್ತ ಸಹಾಯಕರಿಗೆ ಕಳುಹಿಸುತ್ತಾ ಮಾನ್ಯ ಆಯುಕ್ತರ ಗಮನಕ್ಕೆ ತರುವಂತೆ ಕೋರಿದೆ.

1. ಮಾನ್ಯ ಆಯುಕ್ತರ ಆಪ್ತ ಸಹಾಯಕರಿಗೆ ಕಳುಹಿಸುತ್ತಾ ಮಾನ್ಯ ಆಯುಕ್ತರ ಗಮನಕ್ಕೆ ತರುವಂತೆ ಕೋರಿದೆ.
2. ವಿಶೇಷ ಆಯುಕ್ತರು ಆಡಳಿತ ರವರ ಅವಗಾಹನೆಗೆ ಸಲ್ಲಿಸಿದೆ.
3. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
4. ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳು ರವರ ಅವಗಾಹನೆಗೆ ಸಲ್ಲಿಸಿದೆ.